ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 91 (624)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಕಲಬುರಗಿ ಜಿಲ್ಲೆಯಲ್ಲಿನ ಕಳ್ಳತನದ ಪ್ರಕರಣಗಳ ಬಗ್ಗೆ

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ 03 ವರ್ಷಗಳಲ್ಲಿ ನಡೆದಿರುವ ಕಳ್ಳತನದ ಪ್ರಕರಣಗಳೆಷ್ಟು; ಅವು ಯಾವುವು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಪ್ರಕರಣಗಳಲ್ಲಿ ಕಳ್ಳರನ್ನು ಪತ್ತೆ ಹಚ್ಚಲಾಗಿದೆ ಹಾಗೂ ಬಂಧಿಸಲಾಗಿದೆ; ಎಷ್ಟು ಪ್ರಕರಣಗಳಲ್ಲಿ ಕಳ್ಳತನ ಮಾಡಿದ ವಸ್ತುಗಳನ್ನು ಹಿಂದಿರುಗಿಸಲಾಗಿದೆ;

(ಇ) ಹಲವು ತಿಂಗಳುಗಳು ಕಳೆದರೂ ಕಳ್ಳರನ್ನು ಪತ್ತೆ ಹಚ್ಚದಿರಲು ಕಾರಣಗಳೇನು; ಎಷ್ಟು ದಿನಗಳಲ್ಲಿ ಪತ್ತೆ ಹಚ್ಚಲಾಗುವುದು;

(ಈ) ಕರ್ನಾಟಕದಲ್ಲಿ ಕ್ರಿಕೆಟ್ ಐಪಿಎಲ್ ಬೆಟ್ಟಿಂಗ್, ಮಟ್ಕಾ (ಓ.ಸಿ) ದಂಧೆಗಳಲ್ಲಿ ದಾಖಲಾದ ಪ್ರಕರಣಗಳು ಎಷ್ಟು; ಹೊರ ರಾಜ್ಯದ ಪೋಲಿಸರು ಕರ್ನಾಟಕದಲ್ಲಿ ಬಂದು ಕ್ರಿಕೆಟ್ ಐಪಿಎಲ್ ಬೆಟ್ಟಿಂಗ್, ಮಟ್ಕಾ (ಓಸಿ) ಪ್ರಕರಣಗಳನ್ನು ಪತ್ತೇ ಹಚ್ಚಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಪ್ರಕರಣಗಳು ಮತ್ತು ರಾಜ್ಯದ ಇನ್ನಿತರ ಜಿಲ್ಲೆಗಳಲ್ಲಿ ಎಷ್ಟು ಪ್ರಕರಣಗಳು ಪತ್ತೆಯಾಗಿದೆ. ಕ್ರಿಕೆಟ್ ಐಪಿಎಲ್ ಬೆಟ್ಟಿಂಗ್ ಮಟ್ಕಾ (ಓ.ಸಿ)ದಂತಹ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?